**Akashvani : Bangalore**
**Regional Bulletin In Kannada**
**26.05.2025 / 13.10 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.05.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ಗುಜರಾತ್‌ನ ವಡೋದರದಲ್ಲಿ ಪ್ರಧಾನಿ ನರೇಂದ್ರ ಮೋದಿ ರೋಡ್ ಶೋ ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

೨. ಭಯೋತ್ಪಾದನೆ ವಿರುದ್ಧ ಭಾರತದ ಶೂನ್ಯ ಸಹಿಷ್ಣುತೆ ಘೋಷಿಸುವಲ್ಲಿ ದೇಶ ಒಗ್ಗಟ್ಟಾಗಿ ನಿಂತಿದೆ - ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್

೩. ಭಾರತದಲ್ಲಿ ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸಲಿರುವ ವಿದೇಶದ ೧೫ ವಿಶ್ವವಿದ್ಯಾನಿಲಯಗಳು

೪. ಐಪಿಎಲ್ ಟಿ-೨೦ ಕ್ರಿಕೆಟ್; ಪಂಜಾಬ್ ಕಿಂಗ್ಸ್ ಮುಂಬೈ ಇಂಡಿಯನ್ಸ್ ತಂಡಗಳು ಇಂದು ಮುಖಾಮುಖಿ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಗುಜರಾತ್‌ನ ವಡೋದರದಲ್ಲಿ ರೋಡ್ ಶೋ ನಡೆಸಿದರು. ರಸ್ತೆ ಇಕ್ಕೆಲಗಳಲ್ಲಿ ಸೇರಿದ್ದ ಸಾವಿರಾರು ಜನರು ಪ್ರಧಾನಿಯವರಿಗೆ ಸ್ವಾಗತ ಕೋರಿದರು. ಬಳಿಕ ಅವರು, ದಾಹೋದ್‌ನಲ್ಲಿ ಸುಮಾರು ೨೪ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಎರಡು ದಿನಗಳ ಗುಜರಾತ್ ಭೇಟಿಯ ಸಂದರ್ಭದಲ್ಲಿ ಅವರು, ದಾಹೋದ್ ಲೋಕೋಮೋಟಿವ್ ಉತ್ಪಾದನಾ ಘಟಕವನ್ನು ರಾಷ್ಟ್ರಕ್ಕೆ ಅರ್ಪಿಸಲಿದ್ದಾರೆ. ಈ ಘಟಕವು ಮುಂದಿನ ೧೧ ವರ್ಷಗಳಲ್ಲಿ ಒಂದು ಸಾವಿರ ೨೦೦ ವಿದ್ಯುತ್ ಸರಕು ಲೋಕೋಮೋಟಿವ್‌ಗಳನ್ನು ಉತ್ಪಾದಿಸಲಿದೆ. ನಂತರ, ಪ್ರಧಾನಿ ಅವರು

ಭುಜ್‌ನಲ್ಲಿ ೫೩ ಸಾವಿರ ೪೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ.

<><*<><>*><>

ಪ್ರಧಾನಿಯಾಗಿ ನರೇಂದ್ರ ಮೋದಿ ಅವರು, ಇಂದಿಗೆ ೧೧ ವರ್ಷ ಪೂರೈಸಿದ್ದಾರೆ. ೨೦೧೪ ಮೇ ೨೬ರಂದು ರಲ್ಲಿ ಮೊದಲ ಬಾರಿಗೆ ಪ್ರಧಾನಿಯಾಗಿ ಅವರು, ಪ್ರಮಾಣ ವಚನ ಸ್ವೀಕರಿಸಿದ್ದರು. ೨೦೧೪ರಲ್ಲಿ, ಬಿಜೆಪಿಗೆ ಸ್ಪಷ್ಟ ಜನಾದೇಶ ದೊರೆಯುವ ಮೂಲಕ ಕಳೆದ ೩೦ ವರ್ಷಗಳಿಂದ ಸಮಿಶ್ರ ಸರ್ಕಾರಗಳನ್ನು ಕಂಡಿದ್ದ ದೇಶದ ರಾಜಕೀಯ ಚಿತ್ರಣ ಬದಲಾವಣೆಗೊಂಡಿತ್ತು.

<><*<><>*><>

ಪಾಕಿಸ್ತಾನದಿಂದ ಗಡಿಯಾಚೆಗಿನ ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತ ಈಗ ಹೊಸ ವಿಧಾನವನ್ನು ಹೊಂದಿದೆ. ಅಂತಹ ಅಪರಾಧಗಳಲ್ಲಿ ಭಾಗಿಯಾಗಿರುವ ಯಾರಾದರೂ ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ಸಂಸದ ಶಶಿ ತರೂರ್ ಹೇಳಿದ್ದಾರೆ. ಅಮೆರಿಕದ ನ್ಯೂಯಾರ್ಕ್‌ನಲ್ಲಿ ನಡೆದ ಕಾರ್ಯಕ್ರಮವೊಂದನ್ನು ಉದ್ದೇಶಿಸಿ ಅವರು ಮಾತನಾಡಿದರು. ನ್ಯೂಯಾರ್ಕ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಭಾರತೀಯ ಸಮುದಾಯದ ಅನೇಕ ಸದಸ್ಯರು, ಮಾಧ್ಯಮ ಪ್ರತಿನಿಧಿಗಳು ಹಾಗೂ ಚಿಂತಕರು ಭಾಗವಹಿಸಿದ್ದರು.

ಧ್ವನಿ: ಶಶಿ ತರೂರ್

ಬಳಿಕ ಶಶಿ ತರೂರ್ ನೇತೃತ್ವದ ನಿಯೋಗವು ನ್ಯೂಯಾರ್ಕ್‌ನಲ್ಲಿರುವ ೯/೧೧ ಸ್ಮಾರಕಕ್ಕೆ ಭೇಟಿ ನೀಡಿತು. ಇದೇ ವೇಳೆ ನಿಯೋಗವು ಗಯಾನ ಉಪಾಧ್ಯಕ್ಷ ಭರತ್ ಜಗದಿಯೊ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿತ್ತು. ಸರ್ವಪಕ್ಷ ನಿಯೋಗಗಳು ಮಾಡುತ್ತಿರುವ ಪ್ರಯತ್ನಗಳನ್ನು ಶ್ಲಾಘಿಸಿರುವ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆ ಘೋಷಿಸುವಲ್ಲಿ ಭಾರತ ಒಗ್ಗಟ್ಟಾಗಿ ನಿಂತಿದೆ ಎಂದು ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಹೇಳಿದ್ದಾರೆ.

<><*<><>*><>

ಇನ್ನೊಂದಡೆ, ಬಹ್ರೇನ್‌ನಲ್ಲಿ ಬಿಜೆಪಿ ಸಂಸದ ಬೈಜಯಂತ್ ಜೈ ಪಾಂಡ ನೇತೃತ್ವದ ಸರ್ವಪಕ್ಷ ನಿಯೋಗವು ಬಹ್ರೇನ್ ಉಪಪ್ರಧಾನಿ ಶೇಖ್ ಖಾಲೀದ್ ಬಿನ್ ಅಬ್ದುಲ್ಲಾ ಅಲ್ ಖಲೀಫ ಅವರಿಗೆ ಭಾರತ ಎದುರಿಸುತ್ತಿರುವ ಗಡಿಯಾಚೆಗಿನ ಭಯೋತ್ಪಾದನೆ ಸವಾಲು ಮತ್ತು ಅದನ್ನು ಎದುರಿಸಲು ಭಾರತದ ದೃಢವಾದ ಸಂಕಲ್ಪದ ಬಗ್ಗೆ ವಿವರಿಸಿತು.ದಕ್ಷಿಣ ಕೋರಿಯಾದಲ್ಲಿ ಜೆಡಿಯು ಸಂಸದ ಸಂಜಯ್ ಝಾ ನೇತೃತ್ವದ ಸರ್ವಪಕ್ಷ ನಿಯೋಗವು ಆಪರೇಷನ್ ಸಿಂಧೂರ್ ರಕ್ಷಣಾ ಕಾರ್ಯಾಚರಣೆ ಕುರಿತು ಭಾರತೀಯ ಸಮುದಾಯಕ್ಕೆ ವಿವರಿಸಿತು. ಬಳಿಕ ದಕ್ಷಿಣ ಕೋರಿಯಾ ಮಾಜಿ ವಿದೇಶಾಂಗ ಸಚಿವ ಡಾ. ಯೂನ್ ಯಂಗ್-ಕ್ವಾನ್ ಸೇರಿದಂತೆ ಪ್ರಮುಖ ನಾಯಕರೊಂದಿಗೆ ಸಂವಾದ ನಡೆಸಿತು.ಎನ್‌ಸಿಪಿ ಸಂಸದೆ ಸುಪ್ರಿಯ ಸುಳೆ ನೇತೃತ್ವದ ಸರ್ವಪಕ್ಷ ನಿಯೋಗವು ದೋಹದಲ್ಲಿ ಕತಾರ್ ಶುರಾ ಮಂಡಳಿಯ ಉಪ ಸಭಾಧ್ಯಕ್ಷ ಡಾ. ಹಮ್ದಾ ಅಲ್ ಸುಲೈತಿ ಮತ್ತು ಇತರೆ ಸಂಸದರನ್ನು ಭೇಟಿಯಾಗಿ ಭಯೋತ್ಪಾದನೆ ವಿರುದ್ಧ ಭಾರತದ ಬಲವಾದ ಸಂದೇಶವನ್ನು ಸಾರಿತು.ಈ ನಡುವೆ ಡಿಎಂಕೆ ಸಂಸದೆ ಕನಿಮೋಳಿ ಕರುಣಾನಿಧಿ ನೇತೃತ್ವದ ಸರ್ವಪಕ್ಷ ನಿಯೋಗವು ಸ್ಲೋವಿನಿಯಾ ತಲುಪಿದೆ.

<><*<><>*><>

ಭಾರತದ 'ಆಪರೇಷನ್ ಸಿಂಧೂರ್' ಸಮಯದಲ್ಲಿ ಪಾಕಿಸ್ತಾನದ ಪ್ರಮುಖವಾದ ನೂರ್ ಖಾನ್ ವಾಯುನೆಲೆಗೆ ಹೆಚ್ಚಿನ ಹಾನಿಯಾಗಿದೆ ಎಂದು ಇತ್ತೀಚಿನ ಉಪಗ್ರಹ ಚಿತ್ರಣಗಳು ಖಚಿತಪಡಿಸಿವೆ.ಪಾಕಿಸ್ತಾನದ ಡ್ರೋನ್ ಮತ್ತು ವಿಐಪಿ ವಾಯುಪಡೆಯ ಪ್ರಮುಖ ಕೇಂದ್ರವಾದ ನೂರ್ ಖಾನ್ ವಾಯುನೆಲೆ, ಇಸ್ಲಾಮಾಬಾದ್‌ನಿಂದ ೨೫ ಕಿಲೋಮೀಟರ್ ದೂರದಲ್ಲಿರುವ ರಾವಲ್ಪಿಂಡಿಯಲ್ಲಿದೆ.ಪಾಕಿಸ್ತಾನದ ನೂರ್ ಖಾನ್ ವಾಯುನೆಲೆಯಲ್ಲಿ ಭಾರತವು ದಾಳಿ ಮಾಡಿದ ಸ್ಥಳದ ಬಳಿಯಿರುವ ಸಂಪೂರ್ಣ ಸಂಕೀರ್ಣವನ್ನು ಈಗ ಕೆಡವಲಾಗಿದೆ ಎಂಬುದನ್ನು ಇದು ಬಹಿರಂಗಪಡಿಸುತ್ತಿದೆ ಎಂದು ರಕ್ಷಣಾ ವಿಶ್ಲೇಷಕ ಡೇಮಿಯನ್ ಸೈಮನ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದಿದ್ದಾರೆ.ಇತ್ತೀಚಿನ ಉಪಗ್ರಹ ದೃಶ್ಯಗಳನ್ನು ಹಂಚಿಕೊಂಡ ದಿ ಇಂಟೆಲ್ ಲ್ಯಾಬ್ ಪ್ರಕಾರ, ಈ ದಾಳಿಯು ಈ ಹಿಂದೆ ವರದಿಯಾದ ಹಾನಿಗಿಂತ ಭೀಕರವಾಗಿದೆ ಎಂದು ಹೇಳಲಾಗಿದೆ.

<><*<><>*><>

ಈ ಶೈಕ್ಷಣಿಕ ವರ್ಷದಲ್ಲಿ ವಿದೇಶದ ೧೫ ವಿಶ್ವವಿದ್ಯಾನಿಲಯಗಳು ಭಾರತದಲ್ಲಿ ತಮ್ಮ ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸಲಿವೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ.ದೆಹಲಿಯಲ್ಲಿ ಇಂದು ನಡೆದ ಬ್ರಿಟನ್‌ನ ಲಿವರ್ ಪೂಲ್ ವಿಶ್ವವಿದ್ಯಾನಿಲಯದೊಂದಿಗೆ ಒಪ್ಪಿಗೆ ಪತ್ರ ವಿನಿಮಯ ಕಾರ್ಯಕ್ರಮದಲ್ಲಿ ಈ ವಿಷಯ ದೃಢಪಡಿಸಿದ ಸಚಿವರು, ಈ ವಿಚಾರವಾಗಿ ಸರ್ಕಾರ ವಿದೇಶಿ ವಿಶ್ವವಿದ್ಯಾನಿಲಯಗಳಿಗೆ ಅನುಮತಿ ನೀಡಿದೆ ಎಂದರು. ಈ ಪಾಲುದಾರಿಕೆಯು ಜಾಗತಿಕ ಉನ್ನತ ಶಿಕ್ಷಣದಲ್ಲಿ ಭಾರತ ವಿಶ್ವಾಸಾರ್ಹ ಪಾಲುದಾರನಾಗಿ ಹೊರಹೊಮ್ಮುತ್ತಿರುವ ಸಂಕೇತವಾಗಿದೆ ಎಂದು ಬಣ್ಣಿಸಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಲಿವರ್‌ಪೂಲ್ ವಿಶ್ವವಿದ್ಯಾಲಯವು ಮುಂದಿನ ವರ್ಷದಿಂದ ಕಾರ್ಯನಿರ್ವಹಿಸಲಿದೆ. ಆಸ್ಟ್ರೇಲಿಯಾ ಮೂಲದ ಎರಡು ವಿಶ್ವವಿದ್ಯಾಲಯಗಳು ಗುಜರಾತ್‌ನಲ್ಲಿ ತಮ್ಮ ಶೈಕ್ಷಣಿಕ ಅವಧಿಗಳನ್ನು ಪ್ರಾರಂಭಿಸಿವೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಜಾರ್ಖಂಡ್‌ನ ಲತೇಹಾರ್ ಜಿಲ್ಲೆಯ ನೇತರ್‌ಹತ್ ಪೋಲೀಸ್ ಠಾಣೆ ವ್ಯಾಪ್ತಿಯಲ್ಲಿ ಜಾರ್ಖಂಡ್ ಪೊಲೀಸರು ನಿನ್ನೆ ನಡೆಸಿದ ಕಾರ್ಯಾಚರಣೆಯಲ್ಲಿ ಮಾವೋವಾದಿ ಸಂಘಟನೆಯ ಕಮಾಂಡರ್ ಮನೀಷ್ ಯಾದವ್ ಹಾಗೂ ಜೆಜೆಎಂಪಿ ಕಮಾಂಡರ್ ಪಪ್ಪು ಲೋಹ್ರಾ ಹತರಾಗಿದ್ದಾರೆ.ಪಪ್ಪು ಲೋಹ್ರಾ ಕುರಿತು ಮಾಹಿತಿ ನೀಡಿದವರಿಗೆ ಹತ್ತು ಲಕ್ಷ ರೂಪಾಯಿ ಹಾಗೂ ಮನೀಷ್ ಯಾದವ್ ಕುರಿತು ಮಾಹಿತಿ ನೀಡಿದವರಿಗೆ ೫ ಲಕ್ಷ ರೂಪಾಯಿ ಬಹುಮಾನ ಘೋಷಿಸಲಾಗಿತ್ತು. ಇದೇ ವೇಳೆ ಮಾವೋವಾದಿ ನಾಯಕ ಕುಂದನ್ ಖೇರ್ವಾರ್‌ನನ್ನು ಪೊಲೀಸರು ಬಂಧಿಸಿದ್ದಾರೆ. ಈತನ ಕುರಿತು ಮಾಹಿತಿ ನೀಡಿದವರಿಗೆ ೧೦ ಲಕ್ಷ ಬಹುಮಾನ ಘೋಷಿಸಲಾಗಿತ್ತು.

<><*<><>*><>

ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡು, ಕೇರಳ, ಮಾಹೆ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅಂಡಮಾನ್ ಮತ್ತು ನಿಕೋಬಾರ್

ದ್ವೀಪಗಳು, ಕೊಂಕಣ, ಗೋವಾ ಮತ್ತು ಮಹಾರಾಷ್ಟ್ರಗಳಲ್ಲಿಯೂ ಇಂದು ಮಳೆಯಾಗುವ ಸಾಧ್ಯತೆ ಇದೆ.ಮುಂದಿನ ಎರಡು ದಿನಗಳಲ್ಲಿ ದೆಹಲಿ, ಆಂಧ್ರಪ್ರದೇಶ, ಗುಜರಾತ್, ಹರಿಯಾಣ, ಚಂಡೀಗಢ, ಹಿಮಾಚಲ ಪ್ರದೇಶ, ಜಾರ್ಖಂಡ್, ಪಂಜಾಬ್ ಮತ್ತು ರಾಜಸ್ಥಾನದಲ್ಲಿ ಗುಡುಗು ಸಹಿತ ಮಳೆ, ಮಿಂಚು ಮತ್ತು ಬಿರುಗಾಳಿ ಬೀಸುವ ಸಾಧ್ಯತೆ ಇದೆ. ಅರುಣಾಚಲ ಪ್ರದೇಶದ ಕೆಲವು ಭಾಗಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದ್ದರೆ, ರಾಜಸ್ಥಾನದಲ್ಲಿ ಉಷ್ಣ ಅಲೆ ಧೂಳಿನ ಸಹಿತ ಬಿರುಗಾಳಿ ಬೀಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಈ ಕುರಿತು ಒಂದು ವರದಿ...

ಮಳೆಯಾಗಿದೆ. ಈ ಅವಧಿಯಲ್ಲಿ ಅತಿಹೆಚ್ಚು ೩೦೭.೯ ಮಿಲಿಮೀಟರ್ ಮಳೆಯಾಗಿದೆ. ಈ ಮೂಲಕ ಇದು ಮೇ ತಿಂಗಳಲ್ಲಿ ಸಾರ್ವಕಾಲಿಕ ದಾಖಲೆಯಾಗಿದೆ.೨೦೨೩ರ ಮೇ ತಿಂಗಳಲ್ಲಿ ಬೆಂಗಳೂರು ನಗರದಲ್ಲಿ ೩೦೫.೪ ಮಿಲಿಮೀಟರ್ ಮಳೆಯಾಗಿತ್ತು. ಇದೇ ರೀತಿ ೨೦೨೨ರ ಮೇನಲ್ಲಿ ೨೭೦.೪ ಮಿಲಿಮೀಟರ್, ೨೦೧೭ರ ಮೇ ತಿಂಗಳಲ್ಲಿ ೨೪೧.೯ ಮಿಲಿಮೀಟರ್ ಹಾಗೂ ೨೦೧೮ರ ಮೇ ನಲ್ಲಿ ೨೩೯.೮ ಮಿಲಿಮೀಟರ್ ಮಳೆಯಾಗುತ್ತು. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಗಾಳಿ ಸಮೇತ ಭಾರೀ ಮಳೆಯಾಗುವ ಮುನ್ನೆಚ್ಚರಿಕೆ ನೀಡಲಾಗಿದೆ. ಬೆಳಗಾವಿ, ಧಾರವಾಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್, ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಹಾವೇರಿ, ಗದಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ವಿಜಯನಗರ, ಯಾದಗಿರಿ, ರಾಯಚೂರು, ಕೊಪ್ಪಳ, ಬೀದರ್‌ನಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ರಾಜಸ್ತಾನದ ಸವಾಯ್ ಮಾನ್ ಸಿಂಗ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಪಂದ್ಯಾವಳಿಯಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

<><*<><>*><>